**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**
**ಓ ಎಸ್ 48/2019**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ದಿನಾಂಕಃ** 25-10-2024 **ಪಿ.ಡಬ್ಲ್ಯೂ** 1

**ಪಾಟೀ ಸವಾಲುಃ ಪ್ರತಿವಾದಿ ಪರ ಶ್ರೀ ಎ ವಿ ಎಂ ವಕೀಲರಿಂದಃ**

ನಾನು ದಾವಾ ಅರ್ಜಿಯಲ್ಲಿ ತೋರಿಸಿದ ವಿಳಾಸದಲ್ಲಿ ವಾಸವಾಗಿದ್ದೇನೆ ಎಂದರೆ ಸರಿ. ನನಗೆ ಒಬ್ಬಳು ಮಗಳು ಇದ್ದಾಳೆ. ದಾವಾ ಆಸ್ತಿ ಸರ್ವೆ ನಂಬರ್ ನನಗೆ ಗೊತ್ತಿಲ್ಲ. ದಾವಾ ಆಸ್ತಿ ನನ್ನ ಹೆಸರಿಗೆ ಇದೆ ಎಂದು ತೋರಿಸಲು ನಾನು ಒಂದು ಒಪ್ಪಂದ ಪತ್ರವನ್ನು ಸಲ್ಲಿಸಿದ್ದೇನೆ. ದಾವಾ ಆಸ್ತಿ ಸಂಬಂದಪಟ್ಟ ಅಧಿಕಾರಿಗಳಿಂದ ಭೂ ಪರಿವರ್ತನೆ ಆಗಿದೆ. ನಿಪಿ.2 ಒಪ್ಪಂದ 2020 ರಲ್ಲಿ ಆಗಿರುತ್ತದೆ. ದಿನಾಂಕ ತಿಂಗಳು ನನಗೆ ನೆನಪಿಲ್ಲ. ಸನ್ 2000 ರಲ್ಲಿ ನಂಜುಂಡಪ್ಪ ದಾವಾ ಆಸ್ತಿಯ ಮಾಲೀಕರು ಇರಲಿಲ್ಲ ಎಂದರೆ ಸರಿಯಲ್ಲ. ನಿಪಿ.2 ಒಪ್ಪಂದವಾದ ಮೇಲೆ ನಾನು ನಂಜುಂಡಪ್ಪನವರಿಗೆ ಯಾವುದೇ ನೊಟೀಸ್ ನೀಡಿಲ್ಲ. ನಂಜುಂಡಪ್ಪನವರಿಗೆ ನೋಟೀಸ್ ನೀಡಲು ತೊಂದರೆ ಇರಲಿಲ್ಲ ಎಂದರೆ ಸರಿ.

**ಸಾಕ್ಷಿಯ ಮುಂದುವರೆದ ಪಾಟೀ ಸವಾಲಿಗಾಗಿ ಮುಂದೂಡಲಾಯಿತು.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ, ಹರಿಹರ